ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಪ್ರಸ್ತಾವದ ಅಂಗೀಕಾರ

ಶ್ರೀ ಎಸ್.ಸುರೇಶ್ ಕುಮಾರ್: (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಉನ್ನತ ಶಿಕ್ಷಣ, ಯೋಜನಾ ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ರಾಜ್ಯ ನವೀನಾತ್ಮಕ ವಿಶ್ವವಿದ್ಯಾಲಯಗಳ ವಿದೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ,

2011ನೇ ಸಾಲಿನ ಕರ್ನಾಟಕ ರಾಜ್ಯ ನವೀನಾತ್ಮಕ ವಿಶ್ವವಿದ್ಯಾಲಯಗಳ ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಆ) ವಿಧೇಯಕವನ್ನು ಮಂಡಿಸುವುದು

ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕ 2011 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವನೆ ಮಂಡಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

2011ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಮುಖ್ಯಮಂತ್ರಿಗಳು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು

ಶ್ರೀ ಬಿ. ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು):– ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

(ಇ) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕ 2011

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು):– ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು: ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ

ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ

ಖಂಡ 2 ಮತ್ತು 3